# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 522

2 ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು

(ವಿಧಾನಸಭೆಯಿಂದ ಚುನಾಯಿತರಾದವರು)

3 ಉತ್ತರಿಸುವ ದಿನಾಂಕ : 12-12-2024

4 ಉತ್ತರಿಸುವವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೇ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟ ಪಥ ರಸ್ತೆಯ ಕಾಮಗಾರಿಯು ಎಂದು ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು, ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ: | • ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೇ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಕಾಮಗಾರಿಗೆ ದಿನಾಂಕ: 10-12-2012 ರಂದು ಗುತ್ತಿಗೆದಾರರಾದ ಮೆ॥ ಸಿಂಪ್ಲೆಕ್ಸ್ ಇನ್‌ಫ್ರಾಸ್ಟ್ರಕ್ಚರ್ಸ್ ಲಿ., ರವರಿಗೆ ಕಾರ್ಯಾದೇಶವನ್ನು ನೀಡಲಾಗಿದ್ದು, ದಿನಾಂಕ: 01-07-2015 ರಂದು ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ.<br>• ಕಾಮಗಾರಿ ಪೂರ್ಣಗೊಳಿಸಲು 18 ತಿಂಗಳ ಕಾಲಾವಧಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ಶೇ.95 ರಷ್ಟು ಕಾಮಗಾರಿಯು ಪೂರ್ಣಗೊಂಡಿರುತ್ತದೆ. |
| ಆ) | ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದರೇ, ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ. | ಗುತ್ತಿಗೆದಾರರು ಕಾಮಗಾರಿ ನಿರ್ವಹಿಸುವಲ್ಲಿ ವಿಳಂಬ ಮಾಡಿದ ಕಾರಣ ರೂ.56,63,972.00 ಗಳ ದಂಡವನ್ನು ವಿಧಿಸಲಾಗಿರುತ್ತದೆ. |
| ಇ) | ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್ ಅನುಮತಿ ನೀಡಲಾಗಿದೆ, ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು) | • ಸದರಿ ಕಾಮಗಾರಿಗೆ ರೂ.102.83 ಕೋಟಿಗಳಿಗೆ ದಿನಾಂಕ: 26-09-2012ರ ಸರ್ಕಾರದ ಆದೇಶದಲ್ಲಿ ಟೆಂಡರ್‌ಗೆ ಅನುಮತಿ ನೀಡಲಾಗಿದೆ.<br>• ದಿನಾಂಕ: 20-09-2019ರ ಆದೇಶದಲ್ಲಿ ರೂ.10.00 ಕೋಟಿಗಳ ಹೆಚ್ಚುವರಿ ಅನುದಾನವನ್ನು ಉಪಯುಕ್ತತೆಗಳ ಸ್ಥಳಾಂತರಿಸುವಿಕೆ, ಹೆಚ್ಚುವರಿ ಭೂಸ್ವಾಧೀನ ಪ್ರಕ್ರಿಯೆಗಾಗಿ ಮತ್ತು ಕಾಮಗಾರಿಯಲ್ಲಿ ಉಂಟಾಗುವ ರೈಲ್ವೇ ಇಲಾಖೆಯ ಹೆಚ್ಚುವರಿ ಮೊತ್ತವನ್ನು ಭರಿಸಲು ಒದಗಿಸಲಾಗಿರುತ್ತದೆ. |

. . .2/-

| | | |
|---|---|---|
| ಈ) | ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಒಂದು ಕಡೆ ರಸ್ತೆ ದೊಡ್ಡದಾಗಿದ್ದು, ತದನಂತರ ರಸ್ತೆ ಕಿರಿದಾಗಿರುವುದರಿಂದ, ಟ್ರಾಫಿಕ್ ಜಾಮ್ ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿದ್ದು (ಅಧಿಕಾರಿಗಳು ಗಮನಹರಿಸಿಲ್ಲವೇ, ಹಾಗಿದ್ದರೇ ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ; ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು? | • ಬೆಂಗಳೂರು-ತುಮಕೂರು ರೈಲ್ವೇ ಮಾರ್ಗದ ಕೆಳಭಾಗದಲ್ಲಿ ಈಗಾಗಲೇ ಒಟ್ಟು 6 ಕೆಳಸೇತುವೆಗಳನ್ನು ರೈಲ್ವೇ ಇಲಾಖೆಯಿಂದ ಪೂರ್ಣಗೊಳಿಸಲಾಗಿದ್ದು, ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ.<br>• ಬೆಂಗಳೂರು-ಚೆನ್ನೈ ರೈಲ್ವೇ ಮಾರ್ಗದ ಕೆಳಭಾಗದಲ್ಲಿ 2 ಕೆಳಸೇತುವೆಗಳನ್ನು ರೈಲ್ವೇ ಇಲಾಖೆಯಿಂದ ಪೂರ್ಣಗೊಳಿಸಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ.<br>• ಬಾಕಿ 2 ಕೆಳಸೇತುವೆಗಳ ನಿರ್ಮಾಣ ಕಾಮಗಾರಿಯು ರೈಲ್ವೇ ಇಲಾಖೆಯಿಂದ ಪೂರ್ಣಗೊಳ್ಳುವ ಹಂತದಲ್ಲಿದ್ದು, ಪೂರ್ಣಗೊಂಡ ನಂತರ ಟ್ರಾಫಿಕ್ ಜಾಮ್ ಸಮಸ್ಯೆಯು ನಿವಾರಣೆಯಾಗುತ್ತದೆ.<br>• ಮಳೆ ನೀರಿನ ಸಮಸ್ಯೆಯನ್ನು ಪರಿಹರಿಸಲು ಈಗಾಗಲೇ ಬೆಂಗಳೂರು-ಚೆನ್ನೈ ರೈಲ್ವೇ ಮಾರ್ಗದ ಕೆಳಭಾಗದಲ್ಲಿ 1200ಮಿ.ಮೀ.ವ್ಯಾಸದ ಎನ್.ಪಿ.-4 ಕೊಳವೆಗಳನ್ನು ಅಳವಡಿಸಿ ಬೃಹತ್ ನೀರುಗಾಲುವೆಗೆ ಸಂಪರ್ಕಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ: ನಅಇ 578 ಎಂಎನ್‌ವೈ 2024 (ಇ)**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ